ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ: ೨೧ನೇ ಮಾರ್ಚ್, ೨೦೧೬**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೭. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಅಂಗನವಾಡಿ ಕೇಂದ್ರಗಳಲ್ಲಿ ಶಿಕ್ಷಕರು ಹಾಗೂ ಸಿಬ್ಬಂದಿಗಳ ಕೊರತೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧ (೫೨೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜರಾಜೇಶ್ವರಿ ನಗರ ವಿಧಾನ ಸಭಾ ವ್ಯಾಪ್ತಿಯ ಯಾವ ಯಾವ ಪ್ರದೇಶದ ಯಾವ ಯಾವ ಬಡಾವಣೆಗಳಲ್ಲಿ ಅಂಗನವಾಡಿ ಕೇಂದ್ರಗಳಿವೆ ;

(ಆ) ಈ ಅಂಗನವಾಡಿ ಕೇಂದ್ರಗಳಲ್ಲಿ ಹಾಲಿ ಖಾಲಿಯಿರುವ ಶಿಕ್ಷಕರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಎಲ್ಲೆಲ್ಲಿ ಖಾಲಿಯಿರುತ್ತವೆ ;

(ಇ) ಅಂಗನವಾಡಿ ಶಿಕ್ಷಕರನ್ನು ನೇಮಿಸಿಕೊಳ್ಳುವಾಗ ಪರಿಗಣಿಸುವ ಅರ್ಹತೆ ಹಾಗೂ ಮಾನದಂಡಗಳೇನು ;

(ಈ) ಈ ಅಂಗನವಾಡಿ ಕೇಂದ್ರಗಳಲ್ಲಿ ಹಾಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಉ) ಸದರಿ ವಿಧಾನ ಸಭಾ ವ್ಯಾಪ್ತಿಯ ಯಾವ ಯಾವ ಪ್ರದೇಶಗಳಲ್ಲಿ ಇನ್ನು ಎಷ್ಟೆಷ್ಟು ಕೇಂದ್ರಗಳ ಅವಶ್ಯಕತೆಯಿರುತ್ತದೆ ಹಾಗೂ ಅವುಗಳನ್ನು ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಕೊರತೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨ (೫೨೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಅಗತ್ಯ ಔಷಧಿಗಳು ಲಭ್ಯವಿಲ್ಲದೆ ರೋಗಿಗಳಿಗೆ ಪ್ರಾಣ ಸಂಕಟ ಎದುರಾಗುವ ಪ್ರಸಂಗಗಳು ಸಂಭವಿಸುತ್ತಿರುವುದು ನಿಜವೇ ;

(ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಲಭ್ಯವಿರುವ ಔಷಧಿಗಳು ಯಾವುವು ;

(ಇ) ಔಷಧಿಗಳ ಕೊರತೆಯಿಂದ ಖಾಸಗಿ ಮೆಡಿಕಲ್ ಶಾಪ್‌ಗಳಿಗೆ ರೋಗಿಗಳನ್ನು ಕಳುಹಿಸುತ್ತಿರುವುದರಿಂದ ಬಡ ರೋಗಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ರೇಬಿಸ್ ಮತ್ತು ಹಾವು ಕಡಿತದಂತಹ ಚಿಕಿತ್ಸೆಗೆ ಅಗತ್ಯವಿರುವ ಪ್ರಾಣರಕ್ಷಕ ಔಷಧಗಳನ್ನು ಅಗತ್ಯ ಪ್ರಮಾಣದಲ್ಲಿ ಮತ್ತು ಸೂಕ್ತ ಸಮಯದಲ್ಲಿ ಲಭ್ಯವಿರುವಂತೆ ಮಾಡಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಮೊರಾರ್ಜಿ ಹಾಗೂ ಇತರೆ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಹಾಗೂ ಕೋರ್ಟ್ ಆದೇಶದ ಮೂಲಕ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ನೀಡುತ್ತಿರುವ ಸೇವಾ ಸೌಲಭ್ಯಗಳ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೩ (೫೬೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ನಡೆಸುತ್ತಿರುವ ಮೊರಾರ್ಜಿ ಹಾಗೂ ಇತರೆ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಹಾಗೂ ಕೋರ್ಟ್‌ನ ಆದೇಶದ ಮೂಲಕ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ, ಉಪನ್ಯಾಸಕರ ಸಂಖ್ಯೆ ಎಷ್ಟು ; (ಮೊರಾರ್ಜಿ, ಕಿತ್ತೂರು ಚೆನ್ನಮ್ಮ, ಅಲ್ಪಸಂಖ್ಯಾತ ವಸತಿ ಶಾಲೆ, ಪದವಿಪೂರ್ವ ಕಾಲೇಜು ಸೇರಿದಂತೆ ; (ವಿವರ ನೀಡುವುದು)

(ಆ) ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ನೀಡುತ್ತಿರುವ ಸೇವಾ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಹೊರಗುತ್ತಿಗೆ ಸಂಸ್ಥೆಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಹೊರಗುತ್ತಿಗೆ ಸಂಸ್ಥೆಗಳಿಂದ ಶಿಕ್ಷಕರ, ಉಪನ್ಯಾಸಕರ ಶೋಷಣೆಯಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಅಗತ್ಯವಿರುವ ಹುದ್ದೆಗಳನ್ನು ಸೃಜಿಸಿ, ನೇರ ನೇಮಕಾತಿ ಮಾಡುವ ಹಾಗೂ ಹೊರಗುತ್ತಿಗೆಯ ಆಧಾರದಲ್ಲಿ ಕೆಲಸ ಮಾಡುತ್ತಿರುವ ಅರ್ಹ ಶಿಕ್ಷಕರನ್ನು ಕೋರ್ಟ್‌ನ ಆದೇಶದಂತೆ ಸಕ್ರಮಗೊಳಿಸಲು ಇಲಾಖೆ ಏನು ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಮಾನ್ವಿ ನಗರದಲ್ಲಿ NEKSRTC ಯಿಂದ ಬಸ್ ಘಟಕ ನಿರ್ಮಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

**೬೪ (೫೯೧)** ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

**(ಅ)** ಮಾನ್ವಿ ನಗರದಲ್ಲಿ NEKSRTC (ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆ) ಯಿಂದ ಬಸ್ ಘಟಕ (Bus Depot ) ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ ; ಪ್ರಸ್ತಾವನೆ ಬಂದಲ್ಲಿ, ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

**(ಆ)** ಇಲ್ಲದಿದ್ದರೆ, ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಳ್ಳಬೇಕಾಗಿರುವ ಕ್ರಮವೇನು ?

## ಹುಬ್ಬಳ್ಳಿಯ ಕರ್ನಾಟಕ ವೈದ್ಯ ಶಿಕ್ಷಣ ಸಂಸ್ಥೆಯ (ಕಿಮ್ಸ್) ನಿರ್ದೇಶಕರ ನಿಯಮಬಾಹಿರ ನೇಮಕಾತಿಯ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**೬೫ (೪೭೯)** ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

**(ಅ)** ಕಿಮ್ಸ್ ನಿರ್ದೇಶಕರ ನೇಮಕಾತಿಯಲ್ಲಿ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಕಾನೂನುಬಾಹಿರವಾಗಿ ನೇಮಕವಾಗಿರುವುದು ನಿಜವೇ ;

**(ಆ)** ಸದರಿ ವಿಷಯ ಸದನದಲ್ಲಿ ಚರ್ಚೆ ಆದಾಗ ತನಿಖೆ ಮಾಡಿಸುವುದಾಗಿ ಆಶ್ವಾಸನೆ ಕೊಟ್ಟಿದ್ದು ನಿಜವೇ ; ನಿಜವಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

**(ಇ)** ಕುಲ ಸಚಿವರು, (ಮೌಲ್ಯಮಾಪನ) ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ಸರ್ಕಾರಕ್ಕೆ ವರದಿ ನೀಡಿದೆಯೇ ; ನೀಡಿದ್ದಲ್ಲಿ, ಯಾವ ದಿನಾಂಕದಂದು ನೀಡಿದೆ ಮತ್ತು ವರದಿಯಲ್ಲಿನ ಮುಖ್ಯಾಂಶಗಳೇನು ;

**(ಈ)** ಸಮಿತಿಯು ನೀಡಿದ ವರದಿಯ ಆಧಾರದ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ಮಹಾನಗರ ವ್ಯಾಪ್ತಿಗೆ ಖಾಸಗಿ ಬಸ್ ಸಂಚಾರ ನಿಷೇಧ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೬ (೪೭೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಗೆ ಖಾಸಗಿ ಬಸ್‌ಗಳ ಸಂಚಾರವನ್ನು ನಿಷೇಧಿಸಿ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಇದರಿಂದಾಗಿ ನಗರದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಬಹುದೆಂದು ಸರ್ಕಾರ ಭಾವಿಸುವುದೆ ;

(ಇ) ಯಾವಾಗಿನಿಂದ ಈ ಆದೇಶ ಜಾರಿ ಮಾಡಲಾಗಿದೆ ; ಇದು ಸಮರ್ಪಕವಾಗಿ ಅನುಷ್ಠಾನಕ್ಕೆ ಬಂದಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಈ) ಈಗಾಗಲೇ ನಗರದ ಹೊರವಲಯದಲ್ಲಿ ನಿರ್ಮಿಸಿರುವ ದೂರಸಂಪರ್ಕ ಬಸ್ ನಿಲ್ದಾಣಗಳು ನಿಷ್ಪ್ರಯೋಜಕವಾಗಿರುವುದು ನಿಜವಲ್ಲವೆ ;

(ಉ) ಪೀಣ್ಯ ಬಸ್ ನಿಲ್ದಾಣವನ್ನು ಪುನಃ ತಡೆಹಿಡಿದಿರುವುದರಿಂದ ನಿಲ್ದಾಣದ ಅಗತ್ಯವೆ ಕಂಡುಬರದ ಸ್ಥಿತಿ ನಿರ್ಮಾಣವಾಗಿರುವುದರ ಬಗ್ಗೆ ಸರ್ಕಾರದ ನಿಲುವೇನು ?

## KSRTC ಮತ್ತು BMTC ಬಸ್‌ಗಳಿಂದ ಆದ ಅಪಘಾತ ಹಾಗೂ ಪರಿಹಾರದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೬೭ (೫೨೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಿಂದ ಬಿ.ಎಂ.ಟಿ.ಸಿ. ಬಸ್‌ಗಳ ಅಪಘಾತಗಳಿಂದ ಮೃತಪಟ್ಟ ಮತ್ತು ಗಾಯಗೊಂಡಿರುವ ಸಾರ್ವಜನಿಕರ ಸಂಖ್ಯೆ ಎಷ್ಟು ;

(ಆ) ಈ ಅಪಘಾತಗಳಿಂದ ಮೃತಪಟ್ಟ ಕುಟುಂಬಗಳಿಗೆ ಹಾಗೂ ಗಾಯಗೊಂಡವರಿಗೆ ನೀಡಿರುವ ಪರಿಹಾರದ ಮೊತ್ತವೆಷ್ಟು ;

**(ಇ)** ಇತ್ತೀಚಿನ ದಿನಗಳಲ್ಲಿ ಬಿ.ಎಂ.ಟಿ.ಸಿ. ಯಲ್ಲಿ ಪರಿಣಿತ ಚಾಲಕರ ಕೊರತೆಯಿಂದಾಗಿ ಈ ಅಪಘಾತಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

**(ಈ)** ಸಾರ್ವಜನಿಕರ ಹಿತದೃಷ್ಟಿಯಿಂದ ಚಾಲಕರನ್ನು ನೇಮಕ ಮಾಡುವ ಸಮಯದಲ್ಲಿ ಯಾವ ರೀತಿಯ ಮಾನದಂಡಗಳನ್ನು ಅನುಸರಿಸಲಾಗುತ್ತದೆ ;

**(ಉ)** ಕೆಲವೊಂದು ಬಿ.ಎಂ.ಟಿ.ಸಿ. ಡಿಪೋಗಳಲ್ಲಿ ವ್ಯವಸ್ಥಾಪಕ ಹಾಗೂ ಮೇಲಾಧಿಕಾರಿಗಳ ಕಿರುಕುಳಗಳಿಂದಾಗಿ ಚಾಲಕರು ಈ ಒಂದು ಅಪಘಾತಗಳನ್ನು ಮಾಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

**(ಊ)** ಹಾಗಿದ್ದರೆ, ಸದರಿ ಚಾಲಕರುಗಳು/ನಿರ್ವಾಹಕರುಗಳ/ಮೇಲಾಧಿಕಾರಿಗಳ ಕಿರುಕುಳದ ಬಗ್ಗೆ ದೂರುಗಳನ್ನು ಸಲ್ಲಿಸಿದ್ದಾರೆಯೇ ; ಅಂತಹ ಅಧಿಕಾರಿಗಳು ಯಾರು ; ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದಲ್ಲಿ ಖಾಸಗಿ ಆಸ್ಪತ್ರೆಗಳ ನಿಯಂತ್ರಣಕ್ಕೆ ಒಂಬಡ್ಸ್‌ಮನ್ ನೇಮಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**೭೮ (೪೭೪)** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

**(ಅ)** ರಾಜ್ಯದಲ್ಲಿ ಖಾಸಗಿ ಆಸ್ಪತ್ರೆಗಳ ವೈದ್ಯರು ಹಾಗೂ ಸಿಬ್ಬಂದಿಗಳ ಮೇಲೆ ಸಾರ್ವಜನಿಕರಿಂದಾಗುವ ಹಲ್ಲೆ ಹಾಗೂ ದೌರ್ಜನ್ಯಗಳನ್ನು ನಿಯಂತ್ರಿಸಲು ಸರ್ಕಾರ ವಿಶೇಷ ಕಾಯಿದೆಯನ್ನು ರೂಪಿಸುವುದೇ ; ಇಲ್ಲವಾದಲ್ಲಿ ಕಾರಣವೇನು ;

**(ಆ)** ರಾಜ್ಯದಲ್ಲಿ ಖಾಸಗಿ ಆಸ್ಪತ್ರೆಗಳ ನಿಯಂತ್ರಣಕ್ಕೆ ಒಂಬಡ್ಸ್‌ಮನ್‌ಗಳನ್ನು ನೇಮಕ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯಿದೆಗೆ (KPME) ಸಾರ್ವಜನಿಕ ಹಿತದೃಷ್ಟಿಯಿಂದ ಖಾಸಗಿ ಆಸ್ಪತ್ರೆಗಳ ಮೇಲೆ ಹೆಚ್ಚು ನಿಯಂತ್ರಣಕ್ಕಾಗಿ ಕಾಯಿದೆಗೆ ತಿದ್ದುಪಡಿ ತರುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ತರಲಾಗುವುದು ; ಇಲ್ಲವಾದಲ್ಲಿ ಕಾರಣವೇನು ;

(ಈ) KPME ಕಾಯಿದೆಗೆ ತಿದ್ದುಪಡಿ ತರುವ ಯೋಜನೆ ಸರ್ಕಾರದ ಮುಂದಿಲ್ಲದಿದ್ದಲ್ಲಿ, ಸಾರ್ವಜನಿಕರಿಗೆ ಖಾಸಗಿ ಆಸ್ಪತ್ರೆಗಳಿಂದ ಆಗತಕ್ಕಂತಹ ಕಿರುಕುಳ ಹಾಗೂ ಶೋಷಣೆಯನ್ನು ನಿಯಂತ್ರಿಸಲು ರೂಪಿಸಿರುವ ಪರಿಹಾರೋಪಾಯಗಳಾವುವು ?

## ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ಮಹಿಳಾ ಕಾರ್ಮಿಕರಿಗೆ ಮೂಲಸೌಕರ್ಯ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು)** –

೭೯ (೪೭೫) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಎಷ್ಟು ವಿಭಾಗಗಳಿವೆ ; ಅವು ಯಾವುವು ;

(ಆ) ಆ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಸ್ ಡಿಪೋಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ವಿಭಾಗವಾರು ಮಾಹಿತಿ ನೀಡುವುದು)

(ಇ) ಆ ಬಸ್ ಡಿಪೋಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರ ಸಂಖ್ಯೆ ಎಷ್ಟು ; (ಡಿಪೋವಾರು ವೃಂದಾವಾರು ಮಾಹಿತಿ ನೀಡುವುದು)

(ಈ) ಈ ಮಹಿಳಾ ಕಾರ್ಮಿಕರಿಗೆ ಎಲ್ಲಾ ಡಿಪೋಗಳಲ್ಲಿ ಪ್ರತ್ಯೇಕವಾಗಿ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಉ) ಮೇಲ್ಕಂಡ ಎಲ್ಲಾ ವಿಭಾಗಗಳಲ್ಲಿ ಮಹಿಳಾ ಕಾರ್ಮಿಕರ ಸಮಸ್ಯೆಗಳನ್ನು ಆಲಿಸಲು ದೂರು ಸಮಿತಿ ಮತ್ತು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಯಾವಾಗ ರಚಿಸಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗ್ರಾಹಕರ ವೇದಿಕೆಯಲ್ಲಿ ಖಾಲಿ ಇರುವ ಅಧ್ಯಕ್ಷರ ಮತ್ತು ಸದಸ್ಯರ ಸಂಖ್ಯೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೭೦ (೪೭೨) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಹಕರ ವೇದಿಕೆಯಲ್ಲಿ ಖಾಲಿ ಇರುವ ಅಧ್ಯಕ್ಷರ ಮತ್ತು ಸದಸ್ಯರ ಸಂಖ್ಯೆ ಎಷ್ಟು ; ಯಾವ ಯಾವ ಹುದ್ದೆಗಳು ಖಾಲಿ ಇವೆ : ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ೨೦೧೫–೧೬ರಲ್ಲಿ ರಾಜ್ಯದಲ್ಲಿ ಗ್ರಾಹಕರ ವೇದಿಕೆಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತೀರ್ಪು ನೀಡಿದ ಕೇಸುಗಳೆಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಗ್ರಾಹಕರಿಗೆ ವಂಚನೆ ಮಾಡುತ್ತಿರುವ ಮಳಿಗೆಗಳ ಮೇಲೆ ದಾಖಲಿಸಿದ ಪ್ರಕರಣಗಳೆಷ್ಟು ; ಗ್ರಾಹಕರ ಬೇಡಿಕೆಯಿಂದ ಈ ಕ್ರಮಕೈಗೊಳ್ಳಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ವಿತರಿಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಮೇಲೆ ಇಲಾಖೆ ಕ್ರಮಕೈಗೊಂಡಿದೆಯೇ ; (ವಿವರ ನೀಡುವುದು)

(ಉ) ಗ್ರಾಹಕರ ವೇದಿಕೆಯ ಮೂಲಕ ಗ್ರಾಹಕರ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಹೆದ್ದಾರಿಗಳಲ್ಲಿನ ಅಪಘಾತ ಮತ್ತು ಸಾವುಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೭೧ (೪೭೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ನೆಲಮಂಗಲದ ಬಳಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಲಾರಿಗೆ ಸಿಕ್ಕಿ ದೇಹ ಎರಡು ತುಂಡಾಗಿ ಜೀವನ್ಮರಣ ಸನ್ನಿವೇಶದಲ್ಲಿ ಅವರು ತಮ್ಮ

ಅಂಗಾಂಗಗಳ ದಾನ ಮಾಡಿದ ಘಟನೆ ತರುವಾಯ ಸರ್ಕಾರ ಎಚ್ಚೆತ್ತುಕೊಂಡು ಯೋಜನೆಯೊಂದನ್ನು ಘೋಷಣೆ ಮಾಡಿರುತ್ತದೆಯೇ ; ಇದ್ದಲ್ಲಿ, ಅವು ಯಾವುವು ; ಹಾಗೂ ಸದರಿ ಯೋಜನೆಯ ವಿವರಗಳನ್ನು ನೀಡುವುದು ;

(ಆ) ಮಿದುಳು ನಿಷ್ಕ್ರಿಯಗೊಂಡು, ತನ್ನ ಅಂಗಾಂಗಗಳ ದಾನ ಮಾಡಿದವರ ಮತ್ತು ಜೀವದಾನ ಪಡೆದವರ ವಿವರಗಳನ್ನು ನೀಡುವುದು ;

(ಇ) ಅಂಗಾಂಗ ದಾನ ಕರ್ನಾಟಕ ವಲಯ ಸಮನ್ವಯ ಸಮಿತಿ (ಜಡ್‌ಸಿಸಿಕೆ)ಯಲ್ಲಿ ಹಾಗೂ ಸರ್ಕಾರದ ಇತರೆ ಏಜನ್ಸಿಗಳಲ್ಲಿ ಅಂಗಾಂಗ ದಾನಕ್ಕೆ ಹೆಸರು ನೊಂದಾಯಿಸಿಕೊಂಡಿರುವ ದಾನಿಗಳ ಸಂಖ್ಯೆ ಎಷ್ಟು ;

(ಈ) ಅಂಗಾಂಗಗಳ ಕಸಿ ಬಯಸಿ, ಅರ್ಜಿ ಸಲ್ಲಿಸಿ, ಕಾಯುತ್ತಿರುವವರ ಸಂಖ್ಯೆ ಎಷ್ಟು ; (ಬಯಸಿರುವ ಅಂಗಾಂಗಗಳವಾರು ವಿವರ ನೀಡುವುದು)

(ಉ) ಅಂಗಾಂಗ ದಾನ ಮಾಡಿದವರ ಕುಟುಂಬಕ್ಕೆ ಸರ್ಕಾರ ಮತ್ತಷ್ಟು ನೆರವನ್ನು ಕೊಡಿಸುವ ಚಿಂತನೆ ಮಾಡುವುದೇ ;

(ಊ) ರಾಜ್ಯ ಹೆದ್ದಾರಿಗಳ ಪ್ರತಿ ೧ ಕಿ.ಮೀ. ಗಳಲ್ಲಿ ಅಂಬುಲೆನ್ಸ್ ಮೊಬೈಲ್ ದೂರವಾಣಿ ಸಂಖ್ಯೆಗಳನ್ನು ಬರೆಯಿಸಿ, ಪ್ರಚಾರ ಮಾಡುವ ವ್ಯವಸ್ಥೆ ಸರ್ಕಾರ ಮಾಡುವುದೇ ;

(ಋ) ಅಪಘಾತಕ್ಕೀಡಾದ ವ್ಯಕ್ತಿಗಳನ್ನು ಆಸ್ಪತ್ರೆಗೆ ಕೊಂಡೊಯ್ದ ವ್ಯಕ್ತಿಗಳನ್ನು ಪೊಲೀಸ್‌ನವರು ಪ್ರಕರಣದ ಮೊಕದ್ದಮೆಗಳಲ್ಲಿ ಸಿಲುಕಿಸಿ, ಸಾಕ್ಷ್ಯ ಮತ್ತಿತರೆ ನೆಪ ಮಾಡಿ ನೀಡುತ್ತಿರುವ ಕಿರುಕುಳದಿಂದ ಬಿಡುಗಡೆ ಮಾಡಲು ಸಂಬಂಧಪಟ್ಟ ಕಾನೂನುಗಳನ್ನು ಸರಳೀಕರಣಗೊಳಿಸಲು ಸರ್ಕಾರ ಚಿಂತಿಸುವುದೇ ?

## ಮೈಸೂರು ನಗರದ ಚಾಮರಾಜಪುರಂ ನ್ಯಾಯಾಲಯಗಳ ಸಂಕೀರ್ಣಕ್ಕೆ ಬಸ್‌ನ ಸೌಲಭ್ಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨ (೬೧೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಚಾಮರಾಜಪುರಂ ನ್ಯಾಯಾಲಯಗಳ ಸಂಕೀರ್ಣದಲ್ಲಿರುವ ೨೩ ಕೋರ್ಟ್‌ಗಳಿಗೆ ಪ್ರತಿದಿನ ಸಾವಿರಾರು ಜನ ರೈಲ್ವೆ ನಿಲ್ದಾಣ ಮತ್ತು ಕೇಂದ್ರ ಗ್ರಾಮೀಣ ಬಸ್ ನಿಲ್ದಾಣದಿಂದ ಈ ನ್ಯಾಯಾಲಯಗಳಿಗೆ ಬರುತ್ತಿದ್ದು, ಇವರಿಗೆ ನ್ಯಾಯಾಲಯದ ಸಮಯಕ್ಕೆ ಸರಿಯಾಗಿ ಹಾಜರಾಗಲು ನೇರ ಬಸ್ ಸೌಲಭ್ಯ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಿಗ್ಗೆ ೯ ರಿಂದ ೧೧ರವರೆಗೆ ರೈಲ್ವೆ ಮತ್ತು ಕೇಂದ್ರ ಬಸ್ ನಿಲ್ಧಾಣದಿಂದ ನ್ಯಾಯಾಲಯದ ಸಂಕೀರ್ಣಕ್ಕೆ ಮತ್ತು ಮಧ್ಯಾಹ್ನ ೩ ರಿಂದ ೬ರವರೆಗೆ ನ್ಯಾಯಾಲಯ ಸಂಕೀರ್ಣದಿಂದ ರೈಲ್ವೆ ಮತ್ತು ಕೇಂದ್ರ ಬಸ್ ನಿಲ್ದಾಣಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ನಗರ ಸಾರಿಗೆ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಈ ನ್ಯಾಯಾಲಯ ಸಂಕೀರ್ಣಕ್ಕೆ ಸಮೀಪದಲ್ಲಿಯೇ ಜಿಲ್ಲಾಧಿಕಾರಿಗಳ ಕಛೇರಿ ಮೈಸೂರು ವಿ.ವಿ. ಕಾರ್ಯಸೌಧ ಮೊದಲಾದ ಕಛೇರಿಗಳು ಇರುವುದರಿಂದ ಇಲ್ಲಿಗೆ ಬಂದು ಹೋಗುವ ಸಾರ್ವಜನಿಕರು ಮತ್ತು ನೌಕರರಿಗೆ ಅನುಕೂಲವಾಗುವಂತೆ ಪ್ರತ್ಯೇಕವಾಗಿ ನಗರ ಸಾರಿಗೆ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಬಿ.ಎಂ.ಟಿ.ಸಿ. ಹಾಗೂ ಕೆ.ಎಸ್.ಆರ್.ಟಿ.ಸಿ. ನಿಗಮಗಳಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರ ಬಗ್ಗೆ

**ಶ್ರೀ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು) –**

೭೩ (**೪೬೩**) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ನಿಗಮಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಉದ್ಯೋಗಿಗಳ ಸಂಖ್ಯೆ ಎಷ್ಟು ; (ನಿಗಮವಾರು ಮತ್ತು ದರ್ಜೆವಾರು ವಿವರ ನೀಡುವುದು)

(ಆ) ಲೈಂಗಿಕ ಕಿರುಕುಳ, ರಜೆ ನೀಡುವಲ್ಲಿ, ರಾತ್ರಿ ಪಾಳಿಗಳಲ್ಲಿ ಮತ್ತು ಶೌಚಾಲಯಗಳ ವ್ಯವಸ್ಥೆ ಮಾಡುವಲ್ಲಿ ಈ ನಿಗಮಗಳ ಆಡಳಿತ ಮಂಡಳಿಗಳು ಮಹಿಳಾ ಉದ್ಯೋಗಿಗಳಿಗೆ ವಿನಾಕಾರಣ ತೊಂದರೆ ನೀಡುತ್ತಿವೆ ಎಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ದೂರುಗಳ ಸಂಖ್ಯೆ ಮತ್ತು ವಿವರಗಳನ್ನು ನೀಡುವುದು)

(ಇ) ಸದರಿ ದೂರುಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ / ಕೈಗೊಳ್ಳಲಿರುವ ಕ್ರಮಗಳೇನು ;

(ಈ) ಪ್ರತಿದಿನ ೫೨ ಲಕ್ಷಕ್ಕಿಂತ ಹೆಚ್ಚು ಪ್ರಯಾಣಿಕರು, ಅದರಲ್ಲೂ ೨೦ ರಿಂದ ೨೫ ಲಕ್ಷ ಮಹಿಳೆಯರು ಮತ್ತು ಮಕ್ಕಳು ಪ್ರಯಾಣಿಸುತ್ತಿದ್ದು, ಅವರ ಸುರಕ್ಷತೆಗಾಗಿ ಸಿ.ಸಿ.ಟಿ.ವಿ.ಯನ್ನು ಅಳವಡಿಸಲಾಗುವುದೆಂದು ಭರವಸೆ ನೀಡಿದ್ದು, ಅದರಂತೆ ಎಷ್ಟು ಬಸ್ಸುಗಳಿಗೆ ಸಿ.ಸಿ.ಟಿ.ವಿ. ಅಳವಡಿಸಲಾಗಿದೆ ; ಅಳವಡಿಸದಿದ್ದಲ್ಲಿ, ಕಾರಣವೇನು ?

## ಹಾವೇರಿಯ್ಲಲಿ ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪಿಸುವ ಬಗ್ಗೆ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪ (೬೦೨) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿಯಲ್ಲಿ ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪಿಸುವುದಾಗಿ ಸರ್ಕಾರವು ೨೦೧೨ ರಲ್ಲಿಯೇ ಘೋಷಿಸಲಾಗಿತ್ತೆ ;

(ಆ) ಹಾಗಿದ್ದಲ್ಲಿ, ಇಂದಿನವರೆವಿಗೂ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ;

(ಇ) ಸದರಿ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮದ ಬಗ್ಗೆ

**ಶ್ರೀ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೭೫ (೫೩೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮ / ಯೋಜನೆಗಳು ಯಾವುವು ; ಸದರಿ ಯೋಜನೆಗಳ ಅನುಷ್ಠಾನಕ್ಕೆ ಒದಗಿಸಲಾಗಿರುವ ಅನುದಾನ ಎಷ್ಟು ;

(ಆ) ವಿವಿಧ ಯೋಜನೆಗಳ ಆಯ್ಕೆ ಪ್ರಕ್ರಿಯೆ ಯಾವ ರೀತಿಯಲ್ಲಿ ನಡೆಸಲಾಗುತ್ತಿದೆ ;

(ಇ) ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ತರುವುದು ಸೇರಿದಂತೆ, ಸಮಾಜದ ಕಟ್ಟ ಕಡೆಯ ಅರ್ಹ ಫಲಾನುಭವಿಗೆ ಯೋಜನೆಯ ಪ್ರಯೋಜನ ತಲುಪಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕಳೆದ ೩ ವರ್ಷಗಳಲ್ಲಿ ಕೆ.ಎ.ಎಸ್./ಐ.ಎ.ಎಸ್. / ಬ್ಯಾಂಕಿಂಗ್ ತರಬೇತಿಗಾಗಿ ಖರ್ಚಾದ ಅನುದಾನ ಎಷ್ಟು ; ತರಬೇತಿ ಪಡೆದು ಉದ್ಯೋಗ ಪಡೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; ತರಬೇತಿ ಪಡೆದ ಒಟ್ಟು ಅಭ್ಯರ್ಥಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ. 1077 – ಏ5